ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆ ಮೇಲ್ದರ್ಜೆಗೇರಿಸುವ ಕುರಿತು

ಶ್ರೀ ಬಸವರಾಜಪಾಟೀಲ್ ಇಟಗಿ (ಸ್ಥಳೀಯಸಂಸ್ಥೆಗಳಿಂದ ಚುನಾಯಿತರಾದವರು):-

601 (661) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯತ್‌ಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಭಿವೃದ್ಧಿ ಅಧಿಕಾರಿ ಹುದ್ದೆಯನ್ನು ಗ್ರೂಪ್-ಬಿ ಹುದ್ದೆಗೆ ಮೇಲ್ದರ್ಜೆಗೇರಿಸುವುದು ಮತ್ತು 2 ಹೆಚ್ಚುವರಿ ಸಹಾಯಕ ನಿರ್ದೇಶಕ ಹುದ್ದೆಗಳನ್ನು ಸೃಜಿಸುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಪ್ರಸ್ತಾವನೆಗೆ ಅನುಮೋದನೆ ನೀಡಿಲ್ಲವೇಕೆ ಮತ್ತು ಪ್ರಸ್ತಾವನೆಗೆ ಯಾವಾಗ ಅನುಮೋದನೆ ನೀಡಲಾಗುವುದು;

(ಇ) ರಾಜ್ಯ ಸ್ಥಳೀಯ ಸಂಸ್ಥೆಗಳನ್ನು ಬಲಿಷ್ಠ ಸ್ಥಳೀಯ ಸಂಸ್ಥೆಗಳನ್ನಾಗಿ ಮಾಡಲು ಕ್ರಮ ಕೈಗೊಂಡಿಲ್ಲವೇಕೆ?